2009–10ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ 2531 ಬೋಧಕ ಹುದ್ದೆಗಳನ್ನು ಅಂದರೆ ದಿ: 01.01.2007 ರಿಂದ ದಿ: 31.12.2008 ರವರೆಗಿನ ಅವಧಿಯಲ್ಲಿ ನಿವೃತ್ತಿ ಮತ್ತು ಇತರೆ ಕಾರಣಗಳಿಂದ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿಯಾಗಿರುವ 2531 ಬೋಧಕ ಹುದ್ದೆಗಳಲ್ಲಿ 1000 ಬೋಧಕ ಹುದ್ದೆಗಳನ್ನು 2009–10ನೇ ಸಾಲಿನಲ್ಲಿ ಹಾಗೂ ಉಳಿದ 1531 ಬೋಧಕ ಹುದ್ದೆಗಳನ್ನು 2010–11ನೇ ಸಾಲಿನಲ್ಲಿ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

ಡಿಪ್ಲೊಮಾ ಮತ್ತು ಇಂಜಿನಿಯರಿಂಗ್ ಕೋರ್ಸ್‌ಗೆ ಕನಿಷ್ಠ ಶೇ 50 ರಷ್ಟು ಅಂಕ ಕಡ್ಡಾಯ

524 (229) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2011–12ನೇ ಸಾಲಿನಲ್ಲಿ ಡಿಪ್ಲೊಮಾ ಮತ್ತು ಇಂಜಿನಿಯರಿಂಗ್ ಕೋರ್ಸುಗಳ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಯಲ್ಲಿ ಕನಿಷ್ಟ ಶೇ.50 ರಷ್ಟು ಅಂಕ ಕಡ್ಡಾಯ ಎಂಬ ನಿಯಮವನ್ನು ಜಾರಿಗೆ ತರಲಾಗಿದೆಯೇ;

ಆ) ಇದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತೊಂದರೆ ಯಾಗುವುದಿಲ್ಲವೆ;

ಇ) ಹಾಗಿದ್ದಲ್ಲಿ, ಈ ನಿರ್ಬಂಧವನ್ನು ರದ್ದುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು) :

ಅ) : ಎಐಸಿಟಿಇ ಯು ರೂಪಿಸಿರುವ ಹೊಸ ಮಾರ್ಗ ಸೂಚಿಗಳನ್ವಯ ಇಂಜಿನಿಯರಿಂಗ್ ಕೋರ್ಸ್‌ನ ಪ್ರವೇಶಕ್ಕೆ ಸಾಮಾನ್ಯ ವರ್ಗದವರು ಶೇಕಡ 50 ಅಂಕಗಳನ್ನು ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗದವರು ಶೇಕಡ 45 ಅಂಕಗಳನ್ನು ಮತ್ತು ಡಿಪ್ಲೊಮಾ

ತರಗತಿಗಳಿಗೆ ಪ್ರವೇಶ ಪಡೆಯಲು ಬಯಸುವ ವಿದ್ಯಾರ್ಥಿಗಳ ಕನಿಷ್ಠ 50% ಅಂಕಗಳನ್ನು ಗಳಿಸುವ ನಿಬಂಧನೆಯು ದಿನಾಂಕ: 24–12–2010 ರ ಎಐಸಿಟಿಇ ಯ ಮಾರ್ಗಸೂಚಿಗಳಲ್ಲಿ ಪ್ರಕಟಿಸಲಾಗಿತ್ತು.

ಕೇಂದ್ರ ಸರ್ಕಾರದ ಅಂಗ ಸಂಸ್ಥೆಯಾದ ಎಐಸಿಟಿಇ ಯು ಶಾಸನಬದ್ಧ ಅಧಿಕಾರವನ್ನು ಹೊಂದಿರುತ್ತದೆ ಮತ್ತು ದೇಶದಲ್ಲಿರುವ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಎಐಸಿಟಿಇ ಯ ವ್ಯಾಪ್ತಿಗೆ ಬರುತ್ತವೆ. ಆದ್ದರಿಂದ ಎಐಸಿಟಿಇ ಯು ಜಾರಿಗೆ ತಂದಿರುವ ಪರಿಷ್ಕೃತ ನಿಯಮಾವಳಿಗಳನ್ನು ಪಾಲಿಸಬೇಕಾಗಿರುತ್ತದೆ.

ಆದರೆ ದಿನಾಂಕ: 04–03–2011 ರಿಂದ ಎಐಸಿಟಿಇ ಯ ವೆಬ್ ಸೈಟ್ ಪರಿಶೀಲಿಸಲಾಗಿ ಡಿಪ್ಲೊಮಾ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಪ್ರವೇಶ ಪಡೆಯಲು ಕನಿಷ್ಟ 35% ಎಂದು ತಿದ್ದುಪಡಿ ಮಾಡಿದೆ.

ಆ) : ಹೌದು.

ಇ) : ಸರ್ಕಾರದ ಪರಿಶೀಲನೆಯಲ್ಲಿದೆ.

ಬೆಂಗಳೂರು ನಗರದಲ್ಲಿ ಸರ್ಕಾರಿ ಗ್ರಂಥಾಲಯ ಸ್ಥಾಪನೆ

525 (230) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ.ಲೇಔಟ್) : ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಎಲ್ಲೆಲ್ಲಿ ಸರ್ಕಾರಿ ಗ್ರಂಥಾಲಯಗಳನ್ನು ತೆರೆಯಲಾಗಿದೆ;

ಆ) ಬೆಂಗಳೂರಿನ ಜಯನಗರ 9ನೇ ಬ್ಲಾಕಿನಲ್ಲಿದ್ದ ಸರ್ಕಾರಿ ಗ್ರಂಥಾಲಯವನ್ನು ಮುಚ್ಚಲಾಗಿದೆಯೇ;

ಇ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು;

ಈ) 2010–11ನೇ ಸಾಲಿನಲ್ಲಿ ಬೆಂಗಳೂರು ನಗರದಲ್ಲಿ ಹೊಸದಾಗಿ ಎಲ್ಲೆಲ್ಲಿ ಸರ್ಕಾರಿ ಗ್ರಂಥಾಲಯಗಳನ್ನು ಪ್ರಾರಂಭಿಸಲಾಗಿದೆ (ವಿಧಾನಸಭಾ ವಾರು ವಿವರ ನೀಡುವುದು);

ಉ) ಬಿ.ಟಿ.ಎಂ. ವಿಧಾನಸಭಾ ಕ್ಷೇತ್ರದಲ್ಲಿ 2011–12ರಲ್ಲಿ ಹೊಸದಾಗಿ ಎಲ್ಲೆಲ್ಲಿ ಸಾರ್ವಜನಿಕ ಗ್ರಂಥಾಲಯಗಳನ್ನು ಆರಂಭಿಸಲಾಗುವುದು?